ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 ದಿನಾಂಕ : 22–12–2020

# ಪತ್ರಿಕಾ ಪ್ರಕಟಣೆ

## ಜನವರಿ 17 ರಂದು ಮಕ್ಕಳಿಗೆ ಪೋಲೀಯೋ ಲಸಿಕೆ : ಮುಖ್ಯ ಕಾರ್ಯದರ್ಶಿ ಟಿ. ಎಂ. ವಿಜಯಭಾಸ್ಕರ್

ಬೆಂಗಳೂರು, ಡಿಸೆಂಬರ್ 22 (ಕರ್ನಾಟಕ ವಾರ್ತೆ):

ಕೋವಿಡ್ –19 ರ ಮಾರ್ಗಸೂಚಿ ಅನ್ವಯ 2021 ನೇ ಜನವರಿ 17 ರಂದು ರಾಜ್ಯದ ಸುಮಾರು 66 ಲಕ್ಷ ಮಕ್ಕಳಿಗೆ ಸುರಕ್ಷಿತವಾಗಿ ಪೋಲಿಯೋ ಲಸಿಕೆ ಹಾಕಲು ಎಲ್ಲಾ ರೀತಿಯ ಮುಂಜಾಗೃತ ಕ್ರಮ ಕೈಗೊಳ್ಳುವಂತೆ ಸಂಬಂಧಿಸಿದ ಇಲಾಖೆಗಳ ಹಿರಿಯ ಅಧಿಕಾರಿಗಳಿಗೆ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಟಿ. ಎಂ. ವಿಜಯಭಾಸ್ಕರ್ ಅವರು ಸೂಚಿಸಿದರು.

ವಿಧಾನ ಸೌಧದ ಸಮಿತಿ ಕೊಠಡಿಯಲ್ಲಿ ಇಂದು ಏರ್ಪಡಿಸಿದ್ದ ಪಲ್ಸ್ ಪೋಲೀಯೋ ರಾಷ್ಟ್ರೀಯ ಲಸಿಕಾ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ರಾಜ್ಯಮಟ್ಟದ ಚಾಲನಾ ಸಮಿತಿ ವಿಡಿಯೋ ಕಾನ್ಪರೆನ್ಸ್ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಮುಖ್ಯ ಕಾರ್ಯದರ್ಶಿ ಅವರು ರಾಜ್ಯದಲ್ಲಿ 5 ವರ್ಷ ವಯೋಮಿತಿ ಒಳಗಿನ ಅಂದಾಜು 66 ಲಕ್ಷ ಮಕ್ಕಳಿದ್ದು ಜನವರಿ 17 ರಂದು ನಡೆಯಲಿರುವ ಪಲ್ಸ್ ಪೋಲೀಯೋ ರಾಷ್ಟ್ರೀಯ ಲಸಿಕಾ ಕಾರ್ಯಕ್ರಮದಡಿ ಎಲ್ಲಾ ಮಕ್ಕಳಿಗೂ ಕಡ್ಡಾಯವಾಗಿ ಲಸಿಕೆ ಹಾಕಲು ಕ್ರಮಕೈಗೊಳ್ಳುವ ಮೂಲಕ ರಾಜ್ಯವನ್ನು ಪಲ್ಸ್ ಪೋಲೀಯೋ ಮುಕ್ತವಾಗಿರಿಸಬೇಕೆಂದು ತಿಳಿಸಿದರು.

ಕೋವಿಡ್ –19 ರ ಸಮಯದಲ್ಲಿ ಈ ಲಸಿಕಾ ಕಾರ್ಯಕ್ರಮ ನಡೆಯುತ್ತಿದ್ದು ಸರ್ಕಾರ ಎಲ್ಲಾ ರೀತಿಯ ಸುರಕ್ಷತಾ ಕ್ರಮಗಳನ್ನು ತೆಗೆದುಕೊಂಡು ಲಸಿಕೆ ಹಾಕಿಸಲು ಪೋಷಕರು ತಮ್ಮ ಐದು ವರ್ಷ ವಯಸ್ಸಿನ ಎಲ್ಲಾ ಮಕ್ಕಳಿಗೂ ಯಾವುದೇ ಆತಂಕಕ್ಕೆ ಒಳಗಾಗದೆ ಪೋಲೀಯೋ ಲಸಿಕೆಯನ್ನು ಹಾಕಿಸುವಂತೆ ಮನವಿ ಮಾಡಿದರು.

ರಾಜ್ಯದ ಜಿಲ್ಲಾ ತಾಲ್ಲೂಕು ಹೋಬಳಿ ಕೇಂದ್ರಗಳು ಸೇರಿದಂತೆ ಪ್ರತಿ ಗ್ರಾಮಗಳಲ್ಲೂ ಸುರಕ್ಷಿತ ಲಸಿಕಾ ಕಾರ್ಯಪಡೆ ಮೂಲಕ ಐದು ವರ್ಷದೊಳಗಿನ ಮಕ್ಕಳಿಗೆ ಪೋಲೀಯೋ ಲಸಿಕೆ ಹಾಕುವುದರ ಜೊತೆಗೆ ಲಸಿಕಾ ಕಾರ್ಯಪಡೆಯ ಮೂಲಕ ನಿಗಾವಹಿಸಲಾಗುವುದು ಎಂದು ತಿಳಿಸಿದರು.

ಮಹಾನಗರಪಾಲಿಕೆಗಳು, ನಗರ ಪ್ರದೇಶಗಳಲ್ಲಿರುವ ಕೊಳಚೆ ಪ್ರದೇಶಗಳಲ್ಲಿನ ಮಕ್ಕಳನ್ನೂ, ಕಟ್ಟಡ ಕಾರ್ಮಿಕರ ಮಕ್ಕಳನ್ನು ಹಾಗೂ ವಲಸೆ ಕಾರ್ಮಿಕರ ಮಕ್ಕಳನ್ನು ಗುರುತಿಸಿ ಅಂತಹ ಮಕ್ಕಳಿಗೆ ಪೋಲೀಯೋ ಲಸಿಕೆ ಹಾಕಿಸುವುದರ ಜೊತೆಗೆ ವಿಮಾನ ನಿಲ್ದಾಣ, ರೈಲು ನಿಲ್ದಾಣ ಹಾಗೂ ಬಸ್‌ನಿಲ್ದಾಣಗಳಲ್ಲಿ ಲಸಿಕಾ ಕೇಂದ್ರಗಳನ್ನು ಸ್ಥಾಪಿಸಿ ಪಯಣಿಗರ ಐದು ವರ್ಷದ ಒಳಗಿನ ಮಕ್ಕಳಿಗೆ ಲಸಿಕೆ ಹಾಕಲು ಎಲ್ಲಾ ರೀತಿಯ ಕ್ರಮ ಜರುಗಿಸಬೇಕು ಎಂದು ಮುಖ್ಯ ಕಾರ್ಯದರ್ಶಿಗಳು ಸೂಚಿಸಿದರು.

ಲಸಿಕೆ ಹಾಕುವ ಕೆಲಸದಲ್ಲಿ ವೈದ್ಯಕೀಯ ಸಿಬ್ಬಂದಿ, ಆಶಾ ಕಾರ್ಯಕರ್ತೆಯವರು, ಅಂಗನವಾಡಿ ಕಾರ್ಯಕರ್ತರು, ಸ್ವಯಂ ಸೇವಕರು ಹಾಗೂ ಈ ಬಾರಿ ಸ್ತ್ರೀ ಶಕ್ತಿ ಸಂಘಗಳು ಪಾಲ್ಗೊಳ್ಳಲ್ಲಿದ್ದು ಲಸಿಕಾ ಕಾರ್ಯಕ್ರಮದಲ್ಲಿ ಪಾಲ್ಗೊಂಡ ಎಲ್ಲಾ ಕಾರ್ಯಕರ್ತರು ಕೋವಿಡ್ –19 ಮಾರ್ಗಸೂಚಿ ಅನ್ವಯ ಕರ್ತವ್ಯ ನಿರ್ವಹಿಸುವಂತೆ ಅಧಿಕಾರಿಗಳು ನೋಡಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪಲ್ಸ್ ಪೊಲಿಯೋ ರಾಷ್ಟ್ರೀಯ ದಿನದ ಲಸಿಕಾ ಯಶಸ್ಸಿಗೆ ಪ್ರಮುಖವಾಗಿ, ವೈದ್ಯಕೀಯ ಶಿಕ್ಷಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಶಿಕ್ಷಣ ಇಲಾಖೆ, ಕಾರ್ಮಿಕ ಇಲಾಖೆ, ವಿದ್ಯುತ್‌ಚ್ಛಕ್ತಿ ಇಲಾಖೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸೇರಿದಂತೆ ಇನ್ನಿತರ ಇಲಾಖೆಗಳು ಪ್ರಮುಖವಾಗಿ ಕರ್ತವ್ಯನಿರ್ವಹಿಸಬೇಕು ಅಲ್ಲದೆ ಕಾರ್ಯಕ್ರಮದ ಯಶಸ್ಸಿಗೆ ರೋಟರಿ ಸಂಸ್ಥೆ, ಲಯನ್ಸ್ ಸಂಸ್ಥೆಗಳ ನೆರವನ್ನು ಪಡೆಯಬೇಕು. ಕಾರ್ಯಕ್ರಮದ ಯಶಸ್ಸಿಗೆ ರಾಜ್ಯ, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟಗಳಲ್ಲಿ ವಿಶೇಷ ಸಮಿತಿಗಳನ್ನು ರಚಿಸಿ ಕಾರ್ಯಕ್ರಮ ಯಶಸ್ವಿಯಾಗುವಂತೆ ನೋಡೊಕೊಳ್ಳಬೇಕು ಎಂದು ಹೇಳಿದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಜಾವೇದ್ ಅಖ್ತರ್, ರಾಷ್ಟ್ರೀಯ ಆರೋಗ್ಯ ಅಭಿಯಾನದ ನಿರ್ದೇಶಕರಾದ ಡಾ: ಅರುಂದತಿ, ಉಪ ನಿರ್ದೇಶಕರಾದ ಡಾ: ರಂಜನಿ ಹಾಗು ಹಿರಿಯ ಅಧಿಕಾರಿಗಳು ವಿಡಿಯೋ ಸಂವಾದ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದು ಚರ್ಚಿಸಿದರು.

## ಸಚಿವರ ಪ್ರವಾಸ

ಬೆಂಗಳೂರು, ಡಿಸೆಂಬರ್ 22 (ಕರ್ನಾಟಕ ವಾರ್ತೆ):

ನಗರಾಭಿವೃದ್ಧಿ ಸಚಿವ ಬಿ.ಎ. ಬಸವರಾಜ ಅವರು ಡಿಸೆಂಬರ್ 25 ರಂದು ಚಿಕ್ಕಮಗಳೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಂದೇ ಸಂಜೆ ಕೇಂದ್ರಸ್ಥಾನಕ್ಕೆ ಹಿಂತಿರುಗುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಕರ್ನಾಟಕ ಗ್ಯಾಸೆಟಿಯರ್ : ಪಿ.ಹೆಚ್‌ಡಿ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನ

ಬೆಂಗಳೂರು, ಡಿಸೆಂಬರ್ 22 (ಕರ್ನಾಟಕ ವಾರ್ತೆ):

ಕರ್ನಾಟಕ ಗ್ಯಾಸೆಟಿಯರ್ ಇಲಾಖೆಯು ರಾಜ್ಯ/ಜಿಲ್ಲೆ/ತಾಲ್ಲೂಕು ಗ್ಯಾಸೆಟಿಯರ್ ಸಂಪುಟಗಳನ್ನು ಕನ್ನಡ ಮತ್ತು ಇಂಗ್ಲೀಷ್ ಭಾಷೆಗಳಲ್ಲಿ ರಚಿಸಿ ಪ್ರಕಟಿಸುವ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದೆ. ಜಿಲ್ಲಾ ಹಾಗೂ ತಾಲ್ಲೂಕು ಗ್ಯಾಸೆಟಿಯರ್ ಸಂಪುಟಗಳಲ್ಲಿ ಪ್ರಮುಖವಾಗಿ ಇತಿಹಾಸ, ಅರ್ಥಶಾಸ್ತ್ರ, ಕನ್ನಡ, ವಾಣಿಜ್ಯ ಶಾಸ್ತ್ರ ಹಾಗೂ ರಾಜ್ಯ ಶಾಸ್ತ್ರಕ್ಕೆ ಸಂಬಂಧಿಸಿದ ಅಧ್ಯಾಯಗಳಿದ್ದು ಲೇಖಕರು ಅಧ್ಯಾಯಗಳ ರಚನಾಕಾರ್ಯ ನಿರ್ವಹಿಸಬೇಕಿರುತ್ತದೆ.

ಇಲಾಖೆಯು 2020-21 ನೇ ಸಾಲಿನಲ್ಲಿ 1)ಬೆಂಗಳೂರು ಗ್ರಾಮಾಂತರ, 2)ರಾಮನಗರ, 3)ಚಿಕ್ಕಬಳ್ಳಾಪುರ ಜಿಲ್ಲಾ ಗ್ಯಾಸೆಟಿಯರ್ ಗಳ ರಚನಾಕಾರ್ಯವನ್ನು ಹಮ್ಮಿಕೊಂಡಿದ್ದು, ಈ ಜಿಲ್ಲಾ ಗ್ಯಾಸೆಟಿಯರ್‌ಗಳ ಅಧ್ಯಾಯಗಳನ್ನು ಸಂಶೋಧನಾ ಕಾರ್ಯದಲ್ಲಿ ಆಸಕ್ತಿಯುಳ್ಳ ಸ್ನಾತಕೋತ್ತರ ಪದವಿಯೊಂದಿಗೆ ಪಿ.ಹೆಚ್‌ಡಿ ಮಾಡಿರುವ, ಅರ್ಹ ವ್ಯಕ್ತಿಗಳಿಂದ ರಚನಾ ಕಾರ್ಯದಲ್ಲಿ 5 ರಿಂದ 10 ವರ್ಷಗಳ ನಿರಂತರ ಅನುಭವ ಉಳ್ಳ ಹಾಗೂ ಸ್ಥಳೀಯ ಹಿನ್ನಲೆಯುಳ್ಳ ಸಂಪನ್ಮೂಲ ವ್ಯಕ್ತಿಗಳಿಂದ ಗ್ಯಾಸೆಟಿಯರ್‌ಗಳನ್ನು ರಚಿಸಲು ಉದ್ದೇಶಿಸಿದೆ.

ಆಸಕ್ತಿಯುಳ್ಳ ಸ್ನಾತಕೋತ್ತರ ಪದವಿಯೊಂದಿಗೆ ಪಿ.ಹೆಚ್‌ಡಿ ಮಾಡಿರುವ ವ್ಯಕ್ತಿಗಳು ತಾವು ರಚಿಸಿರುವ ಪುಸ್ತಕಗಳ/ ಲೇಖನಗಳೊಂದಿಗೆ ಸ್ವವಿವರವನ್ನು ಈ ಕಚೇರಿಯ ಇ-ಮೇಲ್ ವಿಳಾಸ karnatakagazetteer@gmail.comಕ್ಕೆ 15 ದಿನಗಳೊಳಗಾಗಿ ಸಲ್ಲಿಸತಕ್ಕದ್ದು. ಸಂಪನ್ಮೂಲ ವ್ಯಕ್ತಿಗಳು ರಚಿಸಿರುವ/ಬರೆದಿರುವ ಲೇಖನಗಳು/ಪುಸ್ತಕಗಳು, ವಿಶ್ವವಿದ್ಯಾಲಯಗಳು ಪ್ರಕಟಿಸುವ ಜರ್ನಲ್ಸ್/ಪ್ರಸಾರಂಗಗಳಲ್ಲಿ ಪ್ರಕಟಿತಗೊಂಡಿರುವವರಿಗೆ ಆದ್ಯತೆ ನೀಡಲಾಗುವುದು. ಆಯ್ಕೆಯಾದ ಲೇಖಕರಿಗೆ ಅಧ್ಯಾಯ ರಚನಾ ಕಾರ್ಯದಲ್ಲಿ ಸುಮಾರು 350 ರಿಂದ 400 ಪದಗಳ ಮಿತಿಗೊಳಪಟ್ಟ ಪುಟ ಒಂದಕ್ಕೆ ರೂ 750/- ಗಳನ್ನು ಗೌರವ ಸಂಭಾವನೆ ನೀಡಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ಮುಖ್ಯ ಸಂಪಾದಕರು, ಕರ್ನಾಟಕ ಗ್ಯಾಸೆಟಿಯರ್ ಇಲಾಖೆ, ಬೆಂಗಳೂರು ಇವರ ಕಚೇರಿಯ ದೂರವಾಣಿ ಸಂಖ್ಯೆ: 080-22213474 ಮೊ: 9980853108 ಸಂಪರ್ಕಿಸಬಹುದು.

## Launching of FRUITS Portal in an initiative of e-Governance Department of Government of Karnataka

Bengaluru, December 22 (Karnataka Information)

A function was organized at NABARD, Karnataka Regional Office, wherein the **"FRUITS" (Farmer Registration and Unified beneficiary Information System) Portal**, a project of e-Governance, Government of Karnataka was inaugurated.

Delivering the key note address, Ms. A. Manimekhalai, Executive Director, Canara Bank, observed that Karnataka State Government has always been in the forefront of technical initiatives to improve the ease of Banking as can be seen from the various initiatives like BHOOMI Package, Debt Waiver Portal and currently, the FRUITS Portal. The FRUITS Portal is integrated to the BHOOMI Package of the Karnataka State for fetching and validating the land details. One other important facility of this Portal is online creation of charge by which visit of farmers to Sub-Registrar Office is avoided. She thanked the Karnataka State Government and NABARD for identifying our Bank for launching the pilot project and assured that they will take all necessary steps to make the Project, a success.

Speaking on the occasion, Sri Rajeev Chawla, Additional Chief Secretary, e-Governance, Government of Karnataka informed that this is the latest initiative from the Government of Karnataka to bring all the farmers in the State with land and other details to a single Portal. In this Portal, all the farmers will be registered and given a FID Number. Using this number, the Financial Institutions and Lending Institutions can access the land details of the farmers as well as their borrowings and take a quick decision on lending to the farmers depending on their requirements. It is hoped that Bankers will find this initiative, a very useful one. He also lauded Canara Bank for agreeing to take up the Project on a pilot basis. Once the same is found successful, all other Financial Institutions will be brought on to the Portal so that at one place, all the data pertaining to the loans of the farmers will be available.

Neeraj Varma, Chief General Manager & Head of Karnataka Regional Office, NABARD informed that NABARD is always in the forefront to enable improvements in the living standards of farmers by taking initiatives in various fronts such as providing refinance at cheaper rates to Societies and RRBs etc. He also informed that FRUITS Portal is the first of its kind in the country wherein the land and other details of all the farmers in the State are being captured and he hoped that this Project should serve as a role model to other States in the country. Karnataka, being the IT Hub of the country, always had tech-enabled initiatives and this FRUITS Portal is one such proposal from the Government. He also appreciated Canara Bank for accepting the pilot Project and hoped that soon all financial institutions will be onboarded to the Portal so as to have a single data source of the farmers.

The gathering was welcomed by Sandeep Dharkar, Deputy General Manager, NABARD and vote of thanks was proposed by K.R. Badrinath, Deputy General Manager, Canara Bank.

## ಟಯೋಟಾ ಸಮಸ್ಯೆ ಪರಿಹಾರಕ್ಕೆ ಕಾರ್ಮಿಕ ಇಲಾಖೆ ನಿಷೇಧವಿದ್ದರೂ ಮುಷ್ಕರ- ಲಾಕ್‌ಔಟ್

ಬೆಂಗಳೂರು, ಡಿಸೆಂಬರ್ **21, 2020:**

ರಾಮನಗರದ ಬಿಡದಿಯಲ್ಲಿ ಇರುವ ಟಯೋಟಾ ಕಿರ್ಲೋಸ್ಕರ್ ಮೋಟಾರ್ಸ್ ಲಿಮಿಟೆಡ್‌ನಲ್ಲಿ ಕಾರ್ಮಿಕ ಮತ್ತು ಆಡಳಿತ ಮಂಡಳಿ ನಡುವೆ ಉದ್ಭವಿಸಿರುವ ಸಮಸ್ಯೆಗಳನ್ನು ಶಾಂತಿಯುತವಾಗಿ ಪರಿಹರಿಸಲು ಸಚಿವ ಶಿವರಾಂ ಹೆಬ್ಬಾರ್ ಅವರ ಆದೇಶದಂತೆ ಕಾರ್ಮಿಕ ಇಲಾಖೆ ಹತ್ತು ಹಲವು ಪ್ರಯತ್ನಗಳನ್ನು ಮುಂದುವರೆಸಿದೆ. ಮಾನವೀಯ ಮೌಲ್ಯಗಳ ಹಿನ್ನೆಲೆಯಲ್ಲಿ ಕಾರ್ಮಿಕರಿಗೆ ಆಗುತ್ತಿರುವ ತೊಂದರೆಗಳನ್ನು ನಿವಾರಿಸಿ ಕಾರ್ಖಾನೆಯು ಕಾರ್ಯಾರಂಭಗೊಳಿಸುವ ವಾತಾವರಣ ಸೃಷ್ಟಿಸುವ ಮೂಲಕ ಕಾರ್ಮಿಕ ಮತ್ತು ಮಾಲೀಕರ ಸಂಬಂಧ ಗಟ್ಟಿಗೊಳಿಸುವ ಹಲವು ಪ್ರಯತ್ನಗಳಲ್ಲಿ ತೊಡಗಿಸಿಕೊಂಡಿದೆ.

ಕಳೆದ ನವೆಂಬರ್ **9**ರಂದು ಕಾರ್ಮಿಕರ ಸಂಘಟನೆ ಪದಾಧಿಕಾರಿಗಳನ್ನು ಆಡಳಿತ ಮಂಡಳಿ ಅಮಾನತುಗೊಳಿಸಿದ್ದರಿಂದ ದಿಢೀರ್ ಮುಷ್ಕರ ಆರಂಭಿಸಿದ್ದರು ಇದಕ್ಕೆ ಪ್ರತಿಯಾಗಿ ಆಡಳಿತ ಮಂಡಳಿ ಸಹ ಅದೇ **10**ರಂದು ಲಾಕ್‌ಔಟ್ ಘೋಷಿಸುವ ಮೂಲಕ ಸಂಸ್ಥೆಯ ಕಾರ್ಯಕಲಾಪಗಳನ್ನು ಸ್ಥಗಿತಗೊಳಿಸಿತ್ತು. ಈ ಬೆಳವಣಿಗೆಯ ತೀವ್ರತೆಯನ್ನು ಅರಿತಿದ್ದ ಕಾರ್ಮಿಕ ಇಲಾಖೆ ಕೂಡಲೇ ಸಮಸ್ಯೆ ನಿವಾರಣೆಗೆ ಮುಂದಾಯಿತಲ್ಲದೆ, ಇಲಾಖೆ ಸಂಧಾನಕಾರಿಗಳು ಮತ್ತು ಕೈಗಾರಿಕಾ ಬಾಂಧವ್ಯ ವಿಭಾಗದ ಆಯುಕ್ತರು ಕಾರ್ಮಿಕರೊಂದಿಗೆ ಸಂಧಾನ ಸಭೆ ನಡೆಸಿದರು ಮತ್ತು ಕಾರ್ಮಿಕರ ಬೇಡಿಕೆಗಳ ಬಗ್ಗೆ ನ್ಯಾಯಾಧಿಕರಣಕ್ಕೆ ವರದಿ ಸಲ್ಲಿಸುವ ಜತೆ ಜತೆಗೆ ಮುಷ್ಕರ ಮತ್ತು ಲಾಕ್‌ಔಟ್ ನಿರ್ಧಾರಗಳನ್ನು ನಿಷೇಧಿಸುವಂತೆ ವರದಿ ಸಲ್ಲಿಸಿದರು.

ಈ ಶಿಫಾರಸ್ಸಿಗೆ ಪ್ರತಿಯಾಗಿ ಮಾತುಕತೆಗೆ ಉತ್ತಮ ವಾತಾವರಣ ಸೃಷ್ಟಿಸುವ ಸಲುವಾಗಿ ಕಾರ್ಮಿಕ ಇಲಾಖೆಯು ಲಾಕ್‌ಔಟ್ ಮತ್ತು ಮುಷ್ಕರ ಎರಡನ್ನೂ ನಿಷೇಧಿಸಿ ಆದೇಶ ಹೊರಡಿಸಿದೆ. ಇದರ ಪರಿಣಾಮ **18**ರಂದು ಆಡಳಿತ ಮಂಡಳಿ ಲಾಕ್‌ಔಟ್ ತೆರವುಗೊಳಿಸಿ **19**ರಿಂದ ಕೆಲಸಕ್ಕೆ ಹಾಜರಾಗುವಂತೆ ಸೂಚಿಸಿತ್ತು. ಆದರೆ ಪುನಃ ಆಡಳಿತ ಮಂಡಳಿ ಘಟಕದಲ್ಲಿ ಅಶಾಂತಿಯ ವಾತಾವರಣದ ಕಾರಣ ನೀಡಿ ಲಾಕ್‌ಔಟ್ ಘೋಷಿಸಿತು.
ಆದರೆ ಎರಡನೇ ಬಾರಿಯ ಲಾಕ್‌ಔಟ್ ನೋಟಿಸ್‌ನಲ್ಲಿ ಟಯೋಟಾ ಆಡಳಿತ ಮಂಡಳಿಯು ಷರತ್ತುಬದ್ಧ ಒಪ್ಪಿಗೆ ಪತ್ರ ಸಲ್ಲಿಸುವ ಕಾರ್ಮಿಕರಿಗೆ ಕೆಲಸಕ್ಕೆ ಹಾಜರಾಗಲು ಅವಕಾಶ ಮಾಡಿಕೊಟ್ಟಿದೆ. ಇದರ ಪರಿಣಾಮ ಸುಮಾರು **1000** ಕಾರ್ಮಿಕರು ಕಾರ್ಖಾನೆಯಲ್ಲಿ ನಿರ್ಮಾಣ ಕಾರ್ಯದಲ್ಲಿ ತೊಡಗಿದ್ದು, ಒಂದು ಪಾಳೆಯಲ್ಲಿ ಸೂಸುತ್ರವಾಗಿ ಕೆಲಸ ನಡೆಯುತ್ತಿದೆ ಎಂದು ಕಾರ್ಮಿಕ ಇಲಾಖೆ ತಿಳಿಸಿದೆ.

ಈ ನಡುವೆ, ಕಾರ್ಖಾನೆ ಆಡಳಿತ ಮಂಡಳಿಯು ಕರ್ತವ್ಯಲೋಪ ಮತ್ತು ಅಶಿಸ್ತಿನ ಕಾರಣ ನೀಡಿ 69 ಕಾರ್ಮಿಕರನ್ನು ಅಮಾನತುಗೊಳಿಸಿದ ಬೆಳವಣಿಗೆ ನಡೆದಿದ್ದು, ಈ ಬಗ್ಗೆ ಇಲಾಖಾ ವಿಚಾರಣೆ ಬಾಕಿ ಇದ್ದು, ಕಾನೂನು ಪ್ರಕಾರ ನಿಷೇಧಿತ ಲಾಕ್‌ಔಟ್ ಮತ್ತು ಮುಷ್ಕರ ಶಿಕ್ಷಾರ್ಹ ಅಪರಾಧವಾಗಿದ್ದು, ಈ ಬೆಳವಣಿಗೆಗಳ ಹಿನ್ನೆಲೆಯಲ್ಲಿ ಕಾರ್ಮಿಕ ಇಲಾಖೆಯು ಕಾರ್ಮಿಕ ಸಂಘಟನೆಗಳು ಮತ್ತು ಆಡಳಿತ ಮಂಡಳಿ ವಿರುದ್ಧ ಮೊಕದ್ದಮೆ ಹೂಡಲು ಇಲಾಖೆಯ ಮುಖ್ಯ ಕಾರ್ಯದರ್ಶಿಗಳ ಸಮ್ಮುಖದಲ್ಲಿ ವಿಚಾರಣೆ ನಿಗಧಿಪಡಿಸಲಾಗಿದೆ.

ಕಳೆದ 14ರಂದು ಇಲಾಖೆ ಆಯುಕ್ತರುಗಳ ಸಮ್ಮುಖದಲ್ಲಿ ಮತ್ತೊಂದು ಸುತ್ತಿನ ಸಭೆ ಮತ್ತು ಮಾತುಕತೆ ನಡೆಯಿತಾದರೂ, ಕಾರ್ಮಿಕ ಸಂಘಟನೆ ಮತ್ತು ಆಡಳಿತ ಮಂಡಳಿ ನಡುವೆ ಸಹಮತ ಮೂಡದ ಪರಿಣಾಮ ಮಾತುಕತೆ ವಿಫಲಗೊಂಡಿದ್ದರೂ ಸಹ ಕಾರ್ಮಿಕ ಇಲಾಖೆ ಅಗತ್ಯ ಕಾನೂನುಗಳ ಬಳಕೆ ಮೂಲಕ ಉಭಯ ಪಕ್ಷಗಳ ಸಮಸ್ಯೆಗಳನ್ನು ಪರಿಹರಿಸಿ ಉತ್ತಮ ಕಾರ್ಮಿಕ, ಮಾಲೀಕ ಸ್ನೇಹಿ ವಾತಾವರಣ ನಿರ್ಮಿಸುವತ್ತ ತನ್ನ ಪ್ರಯತ್ನಗಳನ್ನು ಮುಂದುವರೆಸಿದೆ.

## ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ

## ಪರಿಸರ ಭವನ, ಬೆಂಗಳೂರು.

### ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ನಿರಂತರ ಪರಿವೀಕ್ಷಕ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕ (AQI), ಬೆಂಗಳೂರು

**ದಿನಾಂಕ: 22.12.2020**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 122 | ಸಾಧಾರಣ | $PM_{2.5}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 133 | ಸಾಧಾರಣ | $PM_{2.5}$ |
| 3 | ಕವಿಕ, ಮೈಸೂರುರಸ್ತೆ | 112 | ಸಾಧಾರಣ | $PM_{10}$ |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 92 | ತೃಪ್ತಿಕರ | $O_3$ |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 98 | ತೃಪ್ತಿಕರ | $PM_{2.5}$ |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 75 | ತೃಪ್ತಿಕರ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, | 28 | ಉತ್ತಮ | $PM_{10}$ |
| 8 | BWSSB, ಕಾಡಬೀಸನಹಳ್ಳಿ | 191 | ಸಾಧಾರಣ | $PM_{2.5}$ |

| | | | | |
|---|---|---|---|---|
| 9 | ಪೀಣ್ಯ | 110 | ಸಾಧಾರಣ | $O_3$ |
| 10 | ಬಿಟಿಎಂ ಲೇಔಟ್ | 165 | ಸಾಧಾರಣ | $O_3$ |

| ವರ್ಗ(ಶ್ರೇಣಿ) | ಉಂಟಾಗಬಹುದಾದಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮ ಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಶ್ವಾಸಕೋಶದಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತಜನರಿಗೂ ಉಸಿರಾಟದ ಅಸ್ವಸ್ಥತೆ |

**Karnataka State Pollution Control Board**
**ParisaraBhavan, Bengaluru**
**AQI of the CAAQM stations established in Bengaluru City**
**Date :22.12.2020**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 122 | Moderate | $PM_{2.5}$ |
| 2 | Jayanagar 5th Block, Shalini ground | 133 | Moderate | $PM_{2.5}$ |
| 3 | KAVIKA, Mysore Road | 112 | Moderate | $PM_{10}$ |
| 4 | Rajeev Gandhi Institute of Chest Disease, NIMHANS, | 92 | Satisfactory | $O_3$ |

| | | | | |
|---|---|---|---|---|
| | Hombegowda Nagar | | | |
| 5 | HSR Layout, near Central Silkboard | 98 | Satisfactory | $PM_{2.5}$ |
| 6 | City Railway Station, Magestic, Bengaluru | 75 | Satisfactory | $PM_{10}$ |
| 7 | Saneguruvanahalli, NisargaBhavan, KSPCB, Shivanagara | 28 | Good | $PM_{10}$ |
| 8 | BWSSB, Kadabesanahalli | 191 | Moderate | $PM_{2.5}$ |
| 9 | Peenya | 110 | Moderate | $O_3$ |
| 10 | BTM Layout | 165 | Moderate | $O_3$ |

| Category (Range) | Possible Health Impacts | Category (Range) | Possible Health Impacts |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung,<br>Heart disease, children and older | Severe (>401) | Respiratory effects even on healthy people |

## ಫ್ರೂಟ್ಸ್ ಪೋರ್ಟಲ್ ಏಕೀಕರಣದ ಪೈಲಟ್ ಯೋಜನೆಗೆ ಚಾಲನೆ

ಬೆಂಗಳೂರು, ಡಿಸೆಂಬರ್ 22 (ಕರ್ನಾಟಕ ವಾರ್ತೆ):

ರಾಜ್ಯ ಸರ್ಕಾರವು ರೈತರ ನೊಂದಣಿಗಾಗಿ FRUITS( Farmer Registration and Unified beneficiary Infomration System) ರೈತರ ನೋಂದಣಿ ಮತ್ತು ಏಕೀಕೃತ ಫಲಾನುಭವಿಗಳ ಮಾಹಿತಿ ವ್ಯವಸ್ಥೆ ತಂತ್ರಾಂಶವನ್ನು ಅಭಿವೃದ್ಧಿಪಡಿಸಿರುತ್ತದೆ ಎಂದು ಅಪರ ಮುಖ್ಯ ಕಾರ್ಯದರ್ಶಿಗಳಾದ ರಾಜೀವ್ ಚಾವ್ಲಾ ಅವರು ತಿಳಿಸಿದರು.

ಇಂದು ನಬಾರ್ಡ್ ಕರ್ನಾಟಕ ಕ್ಷೇತ್ರೀಯ ಕಾರ್ಯಾಲಯದಲ್ಲಿ ಬ್ಯಾಂಕುಗಳೊಂದಿಗೆ ಫ್ರೂಟ್ಸ್ ಪೋರ್ಟಲ್ ಏಕೀಕರಣದ ಪೈಲಟ್ ಯೋಜನೆಯನ್ನು ಅಪರ ಮುಖ್ಯ ಕಾರ್ಯದರ್ಶಿಗಲಾದ ರಾಜೀವ್ ಚಾವ್ಲಾ ಉದ್ಘಾಟಿಸಿದರು.

ಫ್ರೂಟ್ಸ್ ತಂತ್ರಾಂಶವು ರೈತರ ಆಧಾರ್ ಸಂಖ್ಯೆಯನ್ನು UIDAI ಮೂಲಕ ದೃಢೀಕರಿಸಿದ ನಂತರ ರೈತರನ್ನು ನೋಂದಣಿ ಮಾಡಿ ಪ್ರತಿ ರೈತರಿಗೂ ಒಂದು ವಿಶೇಷ ಗುರುತಿನ ಸಂಖ್ಯೆಯನ್ನು ನೀಡಲು ಸಹಕಾರಿಯಾಗಿದೆ. ಫ್ರೂಟ್ಸ್ ತಂತ್ರಾಂಶವು ಭೂಮಿ ತಂತ್ರಾಂಶದೊಂದಿಗೆ ಸಂಯೋಜಿಸಲಾಗಿದ್ದು, ಜಮೀನಿನ ಮಾಲೀಕರ ವಿವರ, ಸರ್ವೆ ನಂ, ಜಮೀನಿನ ವಿಸ್ತೀರ್ಣ ಇತ್ಯಾದಿಗಳ ವಿವರಗಳನ್ನು ವಿದ್ಯುನ್ಮಾನ ರೀತಿಯಲ್ಲಿ ಪಡೆಯುತ್ತದೆ.

ರಾಜ್ಯ ಸರ್ಕಾರವು GPS ಆಧಾರಿತ ಬೆಳೆ ಸಮೀಕ್ಷೆಯನ್ನು ನಡೆಸುತ್ತಿದ್ದು ತಾಕುವಾರು ಬೆಳೆ ಮಾಹಿತಿಯನ್ನು GPS ಛಾಯಾ ಚಿತ್ರಗಳೊಂದಿಗೆ ಸಂಗ್ರಹಿಸುತ್ತಿದೆ. ಫ್ರೂಟ್ಸ್ ತಂತ್ರಾಂಶವನ್ನು ಬೆಳೆ ಸಮೀಕ್ಷೆ ದತ್ತಾಂಶದೊಂದಿಗೆ ಸಂಯೋಜಿಸಲಾಗಿದ್ದು ಬೆಳೆ ವಿವರಗಳನ್ನೂ ಸಹ ವಿದ್ಯುನ್ಮಾನ ರೀತಿಯಲ್ಲಿ ಪಡೆಯುತ್ತಿದೆ.

ಫ್ರೂಟ್ಸ್ ತಂತ್ರಾಂಶದ ಮೂಲಕ ನೀಡಲಾದ ರೈತರ ವಿಶಿಷ್ಟ ಗುರುತಿನ ಸಂಖ್ಯೆಯನ್ನು ಎಲ್ಲಾ ಆರ್ಥಿಕ ಸಂಸ್ಥೆಗಳಲ್ಲಿ ಸಾಲ ವಿತರಣಾ ಸಮಯದಲ್ಲಿ ಬಳಸುವಂತೆ ತೀರ್ಮಾನಿಸಲಾಗಿರುತ್ತದೆ. ಆರ್ಥಿಕ ಸಂಸ್ಥೆಗಳ (ಬ್ಯಾಂಕ್‌ಗಳು ಮತ್ತು ಸಹಕಾರ ಸಂಸ್ಥೆಗಳು) ಬಳಕೆಗಾಗಿ ಒಂದು ಪ್ರತ್ಯೇಕ ಫ್ರೂಟ್ಸ್ ಉಪ ವ್ಯವಸ್ಥೆ ಅಭಿವೃದ್ಧಿ ಪಡಿಸಲಾಗಿದೆ.

ಬ್ಯಾಂಕ್‌ಗಳು ಈ ವ್ಯವಸ್ಥೆಯನ್ನು ಬಳಸಿ ವಿಶಿಷ್ಟ ಗುರುತಿನ ಮೂಲಕ ರೈತರ ವಿವರಗಳನ್ನು ಪಡೆಯಬಹುದು. ಆರ್ಥಿಕ ಸಂಸ್ಥೆಗಳು ಸಾಲ ವಿತರಣೆಯನ್ನು ಸಂಬಂಧಿತ ವಿವರಗಳನ್ನು ಫ್ರೂಟ್ಸ್ ದತ್ತಾಂಶಕ್ಕೆ ನೀಡುವರು. ತದನಂತರ ಫ್ರೂಟ್ಸ್ ವ್ಯವಸ್ಥೆಯ ಈ ಮಾಹಿತಿಯನ್ನು "ಕಾವೇರಿ" (ಭೂ ನೊಂದಣಿ ವ್ಯವಸ್ಥೆ) ಹಾಗೂ "ಭೂಮಿ" ತಂತ್ರಾಂಶಕ್ಕೆ ಕಳುಹಿಸಿ ಕೃಷಿ ಸಾಲದ ವಿವರಗಳನ್ನು ಭೂ ದಾಖಲೆಗಳಲ್ಲಿ ದಾಖಲಿಸಲು ಸಹಕಾರಿಯಾಗುತ್ತದೆ.

**ಫ್ರೂಟ್ಸ್ ವ್ಯವಸ್ಥೆಯ ಬಳಕೆಯಿಂದ ಈ ಮುಂದಿನ ಲಾಭಗಳನ್ನು ಪಡೆಯಬಹುದಾಗಿರುತ್ತದೆ.**

ರೈತರನ್ನು ವಿಶಿಷ್ಟ ಗುರುತಿನ ಸಂಖ್ಯೆಯ ಮೂಲಕ ಗುರುತಿಸುವುದು. ನಿಗದಿತ ಸಾಲದ ಪ್ರಮಾಣದ ಆಧಾರದ ಮೇರೆಗೆ, ಬೆಳೆದ ಬೆಳೆ ಹಾಗೂ ವಿಸ್ತೀರ್ಣದ ಆಧಾರದ ಮೇಲೆ ವಿತರಣೆ. ಸಾಲ ಪಡೆದ ನಂತರ ರೈತರು ಬೆಳೆದ ಬೆಳೆಯು ಸಹ ತಿಳಿಯಬಹುದು. ಕೃಷಿ ಸಾಲದ

ವಿವರಗಳನ್ನು ಭೂ ದಾಖಲೆಗಳಲ್ಲಿ ದಾಖಲಿಸಲಾಗುತ್ತದೆ. ನಕಲಿ ದಾಖಲೆಗಳನ್ನು ಸಲ್ಲಿಸಿ ಹಾಗೂ ಅನಾಮಿಕ ಹೆಸರುಗಳಲ್ಲಿ ಬೆಳೆ ಸಾಲ ಪಡೆಯುವುದನ್ನು ನಿಯಂತ್ರಿಸಬಹುದು. ಅರ್ಹತೆಯಿಲ್ಲದೆ ಒಂದೇ ಜಮೀನಿನ ಮೇಲೆ ಒಂದಕ್ಕಿಂತ ಹೆಚ್ಚುಬಾರಿ ಬೆಳೆ ಸಾಲ ಪಡೆಯುವುದನ್ನು ತಪ್ಪಸಿಸಬಹುದು. ಸವಲತ್ತುಗಳ ಪುನರಾವರ್ತನೆಯ ತಪ್ಪಿಸಬಹುದು.

ಮುಂದಿನ ದಿನಗಳಲ್ಲಿ ಬಡ್ಡಿ ಸಹಾಯ ಧನವನ್ನು ನೇರವಾಗಿ ರೈತರ ಖಾತೆಗೆ ವರ್ಗಾಯಿಸಲು ಸಾಧ್ಯ. ಸಾಲ ಪಡೆದ ರೈತರಿಗೆ ಬೆಳೆ ವಿಮೆಯಡಿ ಸುಲಭವಾಗಿ ನೋಂದಾಯಿಸಬಹುದು. ಸಾಲ ಪಡೆಯದ ರೈತರನ್ನು ಗುರುತಿಸಿ ಅಂತಹ ರೈತರನ್ನು ಆರ್ಥಿಕ ಸಂಸ್ಥೆಗಳ ಮೂಲಕ ಸಾಲ ನೀಡಲು ಕ್ರಮವಹಿಸಬಹುದು, ಅಭಿವೃದ್ಧಿ ಇಲಾಖೆಗಳು ಸಂಭಾವನೀಯ ಫಲಾನುಭವಿಗಳನ್ನು ಗುರುತಿಸಲು ಸಹಕಾರಿಯಾಗುತ್ತದೆ.

ಈ ವ್ಯವಸ್ಥೆಯನ್ನು ನಬಾರ್ಡ್ ಮುಂದಾಳುತ್ವದಲ್ಲಿ ಹಾಗೂ SLBC ಮಾರ್ಗದರ್ಶನದಲ್ಲಿ ಪೈಲಟ್ ಮಾದರಿಯಲ್ಲಿ ಎರಡು ಬ್ಯಾಂಕ್ ಶಾಖೆಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ.

## ಉತ್ತೀರ್ಣತಾ ಪ್ರಮಾಣ ಪತ್ರಗಳನ್ನು ಆಯೋಗದ ವೆಬ್‌ಸೈಟ್ ನಲ್ಲಿ ಲಭ್ಯ

ಬೆಂಗಳೂರು, ಡಿಸೆಂಬರ್ 22 (ಕರ್ನಾಟಕ ವಾರ್ತೆ):

2020ನೇ ಸಾಲಿನ ಪ್ರಥಮ ಅಧಿವೇಶನದ ಇಲಾಖಾ ಪರೀಕ್ಷೆಗಳಲ್ಲಿ ಉತ್ತೀರ್ಣತೆ ಹೊಂದಿರುವ ಅಭ್ಯರ್ಥಿಗಳು ಉತ್ತೀರ್ಣತಾ ಪ್ರಮಾಣ ಪತ್ರಗಳನ್ನು ಆಯೋಗದ ವೆಬ್‌ಸೈಟ್ "http://kpsc.kar.nic.in" ಮುಖಾಂತರ ಡಿಜಿಲಾಕರ್ ಅಕೌಂಟ್‌ನೊಂದಿಗೆ ಆಧಾರ್ ಸಂಖ್ಯೆಯನ್ನು ಜೋಡಿಸಿ ನಂತರ ನಿಮ್ಮ ನೋಂದಣಿ ಸಂಖ್ಯೆ (7 ಅಂಕಿಗಳು) ಯನ್ನು Username ಆಗಿ ಮತ್ತು ಪಾನ್‌ಕಾರ್ಡ್ (PAN CARD) ನಂಬರನ್ನು ಪಾಸ್‌ವರ್ಡ್ ಆಗಿ ಉಪಯೋಗಿಸಿ ಪ್ರಮಾಣಪತ್ರಗಳನ್ನು ಲಾಗಿನ್ ಆದ 3 ರಿಂದ 4 ಗಂಟೆಗಳೊಳಗಾಗಿ ಪಡೆಯಬಹುದಾಗಿದೆ. ಪ್ರಮಾಣ ಪತ್ರವನ್ನು ಡೌನ್‌ಲೋಡ್ ಮಾಡಿಕೊಳ್ಳುವ ಹಂತದಲ್ಲಿ ಯಾವುದಾದರೂ ತಾಂತ್ರಿಕ ದೋಷ ಉಂಟಾದಲ್ಲಿ ಸೇವಾಸಿಂಧು ಸಹಾಯವಾಣಿ ಸಂಖ್ಯೆಗಳು 080–22279954, 8088304855 ಮತ್ತು 6361799796 ಅನ್ನು ಸಂಪರ್ಕಿಸಬಹುದು.